159ನೇಅ

(65)

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

*****

**ಪ್ರಶ್ನೆ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ರಾಜ್ಯದ ವಿವಿಧ ವಿಧಾನ ಸಭಾ ಕ್ಷೇತ್ರಗಳಲ್ಲಿ 2026-27 ಮತ್ತು 2027-28ನೇ ಸಾಲುಗಳಲ್ಲಿ ಅಲ್ಪಸಂಖ್ಯಾತರು ವಾಸಿಸುತ್ತಿರುವ ಕಾಲೋನಿಗಳ ಅಭಿವೃದ್ಧಿಗೆ ರೂ.600.00 ಕೋಟಿಗಳಿಗೆ 02 ವರ್ಷಗಳ ಕ್ರಿಯಾ ಯೋಜನೆಯನ್ನು ರೂಪಿಸಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

**ಉತ್ತರ:-**

ಸರ್ಕಾರದ ಆದೇಶ ಸಂಖ್ಯೆ:MWD-MDS/652/2025 ದಿನಾಂಕ:06.05.2026ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ರಾಜ್ಯದ ವಿವಿಧ ವಿಧಾನ ಸಭಾ ಕ್ಷೇತ್ರಗಳಲ್ಲಿ 2026-27 ಮತ್ತು 2027-28ನೇ ಸಾಲುಗಳಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಕಾಲೋನಿಗಳ ಅಭಿವೃದ್ಧಿಗೆ ರೂ.600.00ಕೋಟಿಗಳಿಗೆ 02 ವರ್ಷಗಳ ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ. (**ಅನುಬಂಧ-1ರಲ್ಲಿ** ನೀಡಲಾಗಿದೆ)

ಅದರಂತೆ, ಮಾನ್ಯ ಮುಖ್ಯಮಂತ್ರಿಗಳು ಅನುಮೋದಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ:MWD-MDS/463/2026, ದಿನಾಂಕ:20.06.2026 ರಲ್ಲಿ ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ರೂ.20.00 ಕೋಟಿಗಳನ್ನು ಅಲ್ಪಸಂಖ್ಯಾತರ ಕಾಲೋನಿಗಳ ಸಮಗ್ರ ಅಭಿವೃದ್ಧಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅಲ್ಪಸಂಖ್ಯಾತರ ಸ್ಲಂ/ ಕಾಲೋನಿ ಅಭಿವೃದ್ಧಿ ಯೋಜನೆಯಡಿ ಅನುದಾನ ಬಿಡುಗಡೆ ಮಾಡಿ ಆದೇಶಿಸಿದೆ. (**ಅನುಬಂಧ-2ರಲ್ಲಿ** ನೀಡಲಾಗಿದೆ)

ಮುಂದುವರೆದು, ರೂ.600.00ಕೋಟಿ ವೆಚ್ಚದಲ್ಲಿ 2026-27 ಮತ್ತು 2027-28ನೇ ಸಾಲಿಗೆ ಅವಶ್ಯವಿರುವ ಅಲ್ಪಸಂಖ್ಯಾತರ ಕಾಲೋನಿಗಳನ್ನು ಅಭಿವೃದ್ಧಿಪಡಿಸಲು, ಅನುದಾನದ ಲಭ್ಯತೆಗನುಗುಣವಾಗಿ ವಿಧಾನಸಭಾ ಕ್ಷೇತ್ರವಾರು ಅನುದಾನವನ್ನು ಮಂಜೂರು ಮಾಡಲು ಅಗತ್ಯ ಕ್ರಮವಹಿಸಲಾಗುವುದು.

ಕಡತ ಸಂಖ್ಯೆ: MWD-LMQ/143/2026

**(ಯು.ಟಿ.ಖಾದರ್ ಫರೀದ್)**
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು